ಶ್ರೀ ಕೆ. ಜೆ. ಜಾರ್ಜ್ (ಗೃಹ ಸಚಿವರು) :

(ಅ) ಕೊರಟಗೆರೆ ಪಟ್ಟಣದಲ್ಲಿರುವ ಪೊಲೀಸ್ ಠಾಣೆ ಹಾಗೂ ಪೊಲೀಸ್ ವಸತಿ ಗೃಹಗಳು ಬಹಳ ಹಳೆಯ ಕಟ್ಟಡಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

(ಆ) (1) ಕೊರಟಗೆರೆ ಪೊಲೀಸ್ ಠಾಣೆಯ ಕಟ್ಟಡವು ಪ್ರಸ್ತುತ ತಾಲ್ಲೂಕು ಕಛೇರಿಯ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ.

(2) ಕೊರಟಗೆರೆಯಲ್ಲಿರುವ 32 ಪೊಲೀಸ್ ವಸತಿ ಗೃಹಗಳು ನಿರ್ಮಾಣವಾಗಿ ಸುಮಾರು 55 ವರ್ಷಗಳಾಗಿರುತ್ತವೆ. ಇವುಗಳ ದುರುಸ್ಥಿಗಾಗಿ ರೂ. 27.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಿ ದುರಸ್ಥಿ ಕಾರ್ಯವನ್ನು ತುಮಕೂರು ನಿರ್ಮಿತಿ ಕೇಂದ್ರ ರವರಿಗೆ ವಹಿಸಲಾಗಿದ್ದು, ನವೀಕರಣ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

(3) ಕೊರಟಗೆರೆ ಪೊಲೀಸ್ ಠಾಣೆಯ ಕಟ್ಟಡವು ಹಳೆಯದಾಗಿದ್ದು, ನೂತನ ಕಟ್ಟಡ ನಿರ್ಮಾಣವನ್ನು ಅನುದಾನದ ಲಭ್ಯತೆಯ ಮೇಲೆ ಮುಂಬರುವ ಆರ್ಥಿಕ ವರ್ಷದಲ್ಲಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

(ಇ) ಕೊರಟಗೆರೆ ಟೌನ್‌ನಲ್ಲಿ ಪೊಲೀಸ್ ಠಾಣಾ ಕಟ್ಟಡವನ್ನು ನಿರ್ಮಿಸಲು ಸೂಕ್ತ ನಿವೇಶನವನ್ನು ಗುರುತಿಸಿಕೊಡುವಂತೆ ತಹಶೀಲ್ದಾರ್ ರವರೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ.

(ಈ) ಈ ಕಟ್ಟಡಗಳ ನವೀಕರಣಕ್ಕೆ ಸರ್ಕಾರವು ರೂ. 27 ಲಕ್ಷ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಿದೆ.

ರೇಷ್ಮೆ ಇಲಾಖೆಯ ಯೋಜನೆಗಳು

1030 (567) ಶ್ರೀ ನಾಗೇಂದ್ರ ಬಿ. :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರೇಷ್ಮೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಕೂಡ್ಲಿಗಿ ತಾಲ್ಲೂಕಿಗೆ ವಿವಿಧ ಯೋಜನೆ ಮತ್ತು ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಮಂಜೂರಾದ ಹಣವೆಷ್ಟು ; (ವರ್ಷವಾರು, ಯೋಜನೆ ಲೆಕ್ಕಶೀರ್ಷಿಕೆವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಯಾವ ಯಾವ ಯೋಜನೆ ಮತ್ತು ಲೆಕ್ಕಶೀರ್ಷಿಕೆಗಳಡಿಯಲ್ಲಿ ಯೋಜನೆಗಳ ಲಾಭ ಪಡೆದ ಫಲಾನುಭವಿಗಳೆಷ್ಟು ? (ಪೂರ್ಣ ವಿವರ ನೀಡುವುದು)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :

(ಅ) ರೇಷ್ಮೆ ಕೃಷಿ ಅಭಿವೃದ್ಧಿಗಾಗಿ ಈ ಕೆಳಕಂಡ ಫಲಾನುಭವಿ ಆಧಾರಿತ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ಕೆಟಲಿಟಿಕ್ ಅಭಿವೃದ್ಧಿ ಯೋಜನೆ.
2. ರೇಷ್ಮೆ ವರದಾನ ಯೋಜನೆ.
3. ವಿಶೇಷ ಘಟಕ ಯೋಜನೆ.
4. ಗಿರಿಜನ ಉಪ ಯೋಜನೆ.
5. ರೇಷ್ಮೆ ಹುಳು ಸಾಕಾಣಿಕೆ ಚಟುವಟಿಕೆ ಅಭಿವೃದ್ಧಿ.
6. ರೇಷ್ಮೆ ವ್ಯವಸಾಯ ಅಭಿವೃದ್ಧಿ ಕ್ಲಸ್ಟರ್.
7. ಬೈವೋಲ್ಟೈನ್ ಬಿತ್ತನೆ ಗೂಡು ಉತ್ತೇಜಕಗಳು.
8. ದ್ವಿತಳಿ ಚಾಕಿ ಸಾಕಾಣಿಕೆ ವೆಚ್ಚಗಳು.
9. ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ.
10. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ.
11. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ.
12. ಜಿಲ್ಲಾ/ತಾಲ್ಲೂಕು ಪಂಚಾಯತ್ ಯೋಜನೆಗಳು.

<u>ಇತರ ಸೌಲಭ್ಯಗಳು</u>

1. ನೂತನ ತಾಂತ್ರಿಕತೆಗಳ ಅನುಸರಣೆಗಾಗಿ ತರಬೇತಿ ಮತ್ತು ಮಾರ್ಗದರ್ಶನ.
2. ಉತ್ತಮ ಗುಣಮಟ್ಟದ ಮೊಟ್ಟೆಗಳ ಸರಬರಾಜು.
3. ಬೆಳೆದ ಗೂಡುಗಳ ವಿಲೇವಾರಿಗಾಗಿ ರೇಷ್ಮೆ ಗೂಡು ಮಾರುಕಟ್ಟೆಗಳ ನಿರ್ವಹಣೆ.

4. ಉತ್ಪಾದಿಸಿದ ಕಚ್ಚಾ ರೇಷ್ಮೆಯ ವಹಿವಾಟಿಗಾಗಿ ರೇಷ್ಮೆ ವಿನಿಮಯ ಕೇಂದ್ರಗಳ ನಿರ್ವಹಣೆ.

5. ರೇಷ್ಮೆ ವ್ಯವಸಾಯದ ಚಟುವಟಿಕೆಗಳಿಗಾಗಿ ಬ್ಯಾಂಕುಗಳಿಂದ ಸಾಲ ಸೌಲಭ್ಯ ಪಡೆಯಲು ಸಹಾಯ.

(ಆ) & (ಇ) ಕಳೆದ ಮೂರು ವರ್ಷಗಳಲ್ಲಿ ಕೂಡ್ಲಿಗಿ ತಾಲ್ಲೂಕಿನಲ್ಲಿ ರೇಷ್ಮೆ ಕೃಷಿ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳು, ಲೆಕ್ಕ ಶೀರ್ಷಿಕೆ, ಮಂಜೂರಾದ ಹಣ ಹಾಗೂ ಸಹಾಯ ಪಡೆದ ಫಲಾನುಭವಿಗಳ ಸಂಖ್ಯೆಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ವಿಧಾನಸಭಾ ಚುನಾವಣಾ ಖರ್ಚಿನ ವಿವರ

29 (613) ಶ್ರೀ ವಸಂತ ಬಂಗೇರ. ಕೆ (ಬೆಳ್ತಂಗಡಿ) :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

2013ರ ವಿಧಾನಸಭೆ ಚುನಾವಣೆಗಾಗಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಕಛೇರಿಗೆ ಬಿಡುಗಡೆಯಾದ ಮೊತ್ತ ಎಷ್ಟು ? (ಖರ್ಚಿನ ವಿವರವನ್ನು ನೀಡುವುದು)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :

ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆಯವರಿಗೆ ಬಿಡುಗಡೆಮಾಡಿದ ಅನುದಾನ ಒಟ್ಟು **ರೂ. 681.05 ಲಕ್ಷಗಳು**

ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಇಲ್ಲಿಯವರೆಗೆ ಆದ ಒಟ್ಟು ವೆಚ್ಚ **ರೂ. 352.40 ಲಕ್ಷಗಳು**